92

153ನೇ ಛ

## ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಶಶೀಲ್ ಜಿ. ನಮೋಶಿ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಇತರರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

"ರಾಜ್ಯಾದ್ಯಂತ ವಿವಿಧ ಇಲಾಖೆಗಳಲ್ಲಿ ಸಾವಿರಾರು ಹುದ್ದೆಗಳು ಖಾಲಿ ಇರುವುದು ಕಂಡುಬಂದಿದ್ದು, ಇದರಿಂದಾಗಿ ಸರ್ಕಾರದಿಂದ ಸಾಮಾಜಿಕ, ಶೈಕ್ಷಣಿಕ ಹಾಗೂ ಸಾರ್ವಜನಿಕ ಸೇವೆಗಳನ್ನು ಒದಗಿಸುವಲ್ಲಿ ಸಮಸ್ಯೆಗಳು ಆಗುತ್ತಿರುವುದು ಕಂಡುಬರುತ್ತಿದೆ. ಆದ್ದರಿಂದ ಈ ಖಾಲಿ ಹುದ್ದೆಗಳನ್ನು ಕಾಲಕ್ರಮೇಣ ಭರ್ತಿ ಮಾಡಿಕೊಳ್ಳುವ ಕುರಿತು."

**ಉತ್ತರ:**

"ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳನ್ನು ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗದಂತೆ, ಅಗತ್ಯತೆಗೆ ಅನುಗುಣವಾಗಿ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಮಂಜೂರಾಗಿ ಖಾಲಿಯಿರುವ ಹುದ್ದೆಗಳಿಗೆದುರಾಗಿ, ಮುಂಬಡ್ತಿ ಹುದ್ದೆಗಳನ್ನು ಅರ್ಹ ಅಭ್ಯರ್ಥಿಗಳು ಲಭ್ಯವಾದಂತೆ ಕಾಲಕಾಲಕ್ಕೆ ಮುಂಬಡ್ತಿ ನೀಡುವ ಮೂಲಕ ಕಾರ್ಯನಿರ್ವಹಿಸಲಾಗುತ್ತಿದೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ದಿನಾಂಕ:26.07.2005ರ ಸುತ್ತೋಲೆಯನ್ವಯ ಗ್ರೂಪ್-ಸಿ ವೃಂದದ ಕೆಲವು (ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ವಾಹನ ಚಾಲಕರು) ಮತ್ತು ಗ್ರೂಪ್-ಡಿ ವೃಂದದ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ತಿಳಿಸಲಾಗಿದೆ. ಅದರಂತೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳ ಎದುರಾಗಿ ಅಗತ್ಯವಿರುವ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗ, ಕರ್ನಾಟಕ ಪರೀಕ್ಷಾ ಪ್ರಾಧಿಕಾರಗಳಲ್ಲಿ ವಿವಿಧ ವೃಂದದ ನೇಮಕಾತಿ ಪ್ರಕ್ರಿಯೆಗಳು ಪ್ರಗತಿಯಲ್ಲಿರುತ್ತದೆ. ಕಳೆದ 2 ವರ್ಷಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ವಿವಿಧ ವೃಂದದ 3,272 ಹುದ್ದೆಗಳಿಗೆ ಒಟ್ಟು 44 ಅಧಿಸೂಚನೆಗಳನ್ನು ಹೊರಡಿಸಿದೆ ಹಾಗೂ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವಿವಿಧ ಇಲಾಖೆಗಳಲ್ಲಿನ ವಿವಿಧ ವೃಂದದ 8,139 ಹುದ್ದೆಗಳಿಗೆ ನೇಮಕಾತಿ ಸಂಬಂಧ ಪ್ರಾಧಿಕಾರದಿಂದ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ನೇಮಕಾತಿ ಮಾಡಲು ಕ್ರಮವಹಿಸಲಾಗಿದೆ.

ಮುಂದುವರೆದು, ವಿವಿಧ ಇಲಾಖೆಗಳು ತಮ್ಮ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿ, ಆರ್ಥಿಕ ಇಲಾಖೆಯಿಂದ ಅನುಮೋದಿತವಾದ ಹುದ್ದೆಗಳನ್ನು ಕಾಲಕಾಲಕ್ಕೆ ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿವೆ.

**(ಕಡತ ಸಂಖ್ಯೆ: ಸಿಆಸುಇ 127 ರಾಸ 2024)**

(ಸಹಿ)

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ